# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 927 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | : | ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 24-02-2023 |

*****

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಬೆಳೆಯುತ್ತಿರುವ ತೋಟಗಾರಿಕೆ ಬೆಳೆಗಳಾವುವು: | ವಿಜಯಪುರ ಜಿಲ್ಲೆಯಲ್ಲಿ ಪ್ರಮುಖವಾಗಿ ದ್ರಾಕ್ಷಿ, ದಾಳಿಂಬೆ, ನಿಂಬೆ, ಸೀತಾಫಲ, ಬೋರೆ, ಈರುಳ್ಳಿ, ಟೊಮೊಟೊ, ಬದನೆ, ಮೆಣಸಿನಕಾಯಿ, ನುಗ್ಗೆ, ದಪ್ಪ ಮೆಣಸಿನಕಾಯಿ, ಹುಣಸೆ, ಗುಲಾಬಿ ಮತ್ತು ಇತ್ಯಾದಿ ಬೆಳೆಗಳನ್ನು ಬೆಳೆಯಲಾಗುತ್ತಿದೆ. |
| ಆ) | ದಾಳಿಂಬೆ, ನಿಂಬೆ ಇತರೆ ತೋಟಗಾರಿಕೆ ಬೆಳೆಗಳ ಸಂಸ್ಕರಣೆಗಾಗಿ ಎಷ್ಟು ಕೋಲ್ಡ್ ಸ್ಟೋರೇಜ್ ಗಳನ್ನು ಮಾಡಲಾಗಿದೆ: | ದಾಳಿಂಬೆ, ನಿಂಬೆ ಮತ್ತು ಇತರೆ ತೋಟಗಾರಿಕೆ ಬೆಳೆಗಳ ಸಂರಕ್ಷಣೆಗಾಗಿ ವಿಜಯಪುರ ಜಿಲ್ಲೆಯಲ್ಲಿ ಒಟ್ಟು 38355 ಮೆ.ಟನ್ ಸಾಮರ್ಥ್ಯದ 31 ಕೋಲ್ಡ್ ಸ್ಟೋರೇಜ್ ಗಳು ಇರುತ್ತವೆ. |
| ಇ) | ರಾಜ್ಯ ಸರ್ಕಾರ ತೋಟಗಾರಿಕೆ ಬೆಳೆಗಳನ್ನು ವಿದೇಶಕ್ಕೆ ಮಾರಾಟ ಮಾಡಲು ಕ್ರಮಕೈಗೊಂಡಿದೆಯೇ? (ವಿವರ ನೀಡುವುದು) | ಹೌದು.<br>ತೋಟಗಾರಿಕೆ ಮತ್ತು ಕೃಷಿ ಉತ್ಪನ್ನಗಳ ರಫ್ತು ಅಭಿವೃದ್ಧಿಗಾಗಿ ಕೆಪೆಕ್ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ. ಕೆಪೆಕ್ ಸಂಸ್ಥೆಯು ಅಪೇಡಾ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ ಹಾಗೂ ಇತರೆ ಸಂಸ್ಥೆಗಳ ಸಹಯೋಗದೊಂದಿಗೆ ರೈತ ಉತ್ಪಾದನಾ ಸಂಸ್ಥೆ, ರೈತರು ಹಾಗೂ ಇತರೆ ಉದ್ದಿಮೆದಾರರಿಗೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ರಫ್ತು ತರಬೇತಿ ಕಾರ್ಯಕ್ರಮಗಳನ್ನು ಏರ್ಪಡಿಸಿ ತೋಟಗಾರಿಕಾ ಉತ್ಪನ್ನಗಳ ರಫ್ತಿಗೆ ಸಹಕಾರಿಯಾಗುತ್ತಿದೆ. ಕರ್ನಾಟಕ ರಾಜ್ಯದಿಂದ 2022-23 ನೇ ಸಾಲಿನಲ್ಲಿ ರೂ.859.64 ಕೋಟಿ ಮೌಲ್ಯದ ತೋಟಗಾರಿಕೆ ಉತ್ಪನ್ನಗಳನ್ನು ವಿದೇಶಕ್ಕೆ ರಫ್ತು ಮಾಡಲಾಗಿದೆ. |

**HORTI 110 HGM 2023**

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು